13	ಅಂಜಾರ್	63
14	80 ಬೆಡಗಬೆಟ್ಟು	78
15	ಕೊರಂಗರಪಾಡಿ	5
16	ಬೊಮ್ಮರಬೆಟ್ಟು	62
17	ಪೆರ್ನಾಂಕಿಲಾ	8
18	ಅಲಗೂರು	96
19	ಬಡಾನಿಡ್ಯೂರು	2
	ಒಟ್ಟು	**911**

1301 ಶ್ರೀ ಮೇಟಿ ಹುಲ್ಲಪ್ಪ ಯಮನಪ್ಪ (ಗುಳೇದಗುಡ್ಡ) – ಮಾನ್ಯ ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಳೇದಗುಡ್ಡ ನಗರದಲ್ಲಿ ಜವಳಿ ಪಾರ್ಕ್ ನಿರ್ಮಿಸುವ ಉದ್ದೇಶ ಸರ್ಕಾರದ ಆಲೋಚನೆಯಲ್ಲಿದೆಯೇ,

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಅಪ್ಪಾಸಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಜವಳಿ ಸಚಿವರು)

ಅ) ಹೌದು ಗುಳೇದಗುಡ್ಡ ನಗರದಲ್ಲಿ ಜವಳಿ ಪಾರ್ಕ್ ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದೆ ಇದೆ

ಆ) ಬಾಗಲಕೋಟೆ ಜಿಲ್ಲೆಯ ಗುಳೇದಗುಡ್ಡ ಪಟ್ಟಣದಲ್ಲಿ ಪವರ್‌ಲೂಮ್ಸ್ ಪಾರ್ಕ್‌ನ್ನು ಸ್ಥಾಪಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಂಡಿದೆ

"ಶ್ರೀ ಗುಳೇದಗುಡ್ಡ ಪವರ್‌ಲೂಂ ಮಿನಿ ಪಾರ್ಕ್" ಎಂಬ ಹೆಸರಿನ ಸಂಸ್ಥೆಯನ್ನು ಸ್ಥಾಪಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಈ ಉದ್ದೇಶಿತ ಸಂಸ್ಥೆಯ ಮುಖಾಂತರ 75 ಜನ ಉದ್ದಿಮೆದಾರರು ಉದ್ದಿಮೆ ಸ್ಥಾಪಿಸಲು ಮುಂದೆ

ಬಂದಿರುತ್ತಾರೆ ಪಾರ್ಕ್ ಸ್ಥಾಪನೆಗೆ 19 ಎಕರೆ 37 ಗುಂಟೆ ಜಮೀನನ್ನು ಗುರುತಿಸಿದೆ ಕೆ ಐ ಎ ಡಿ ಬಿ ವತಿಯಿಂದ ಅಭಿವೃದ್ಧಿಪಡಿಸಲು ಯೋಜಿಸಲಾಗಿದೆ ಕೇಂದ್ರ ಸರ್ಕಾರದ ಎಸ್ ಐ ಟಿ ಪಿ ಯೋಜನೆಯಡಿ ಸೌಲಭ್ಯ ಪಡೆಯಲು ಎಸ್ ಪಿ ವಿ ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ ಹೈಟೆಕ್ ಲೂಮ್ಸ್ ಹಾಗೂ ಜವಳಿ ಸಂಬಂಧ ಕೈಗಾರಿಕೆಗಳಿಗೆ ಜಮೀನು ಹಾಗೂ ಮೂಲಭೂತ ಸೌಲಭ್ಯಗಳನ್ನು ಸದರಿ ಜವಳಿ ಪಾರ್ಕ್‌ನಲ್ಲಿ ನೀಡಲಾಗುವುದು

1363 ಶ್ರೀ ಶಿವಾನಂದ ಎಸ್ ಪಾಟೀಲ್ (ಬಸವನಬಾಗೇವಾಡಿ) – ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಸರ್ಕಾರ ಹೊಸದಾಗಿ ತಾಲ್ಲೂಕುಗಳನ್ನು ರಚನೆ ಮಾಡಿದೆಯೇ,

ಆ) ಹಾಗಿದ್ದಲ್ಲಿ ಹೊಸ ತಾಲ್ಲೂಕುಗಳನ್ನು ರಚಿಸಲು ಕೈಗೊಂಡ ಕ್ರಮವೇನು,

ಇ) ರಾಜ್ಯದಲ್ಲಿ ಯಾವ ಯಾವ ಹೊಸ ತಾಲ್ಲೂಕುಗಳನ್ನು ರಚಿಸಲಾಗುವುದು,

ಈ) ಯಾವ ಕಾಲಮಿತಿಯೊಳಗೆ ಹೊಸದಾಗಿ ತಾಲ್ಲೂಕುಗಳನ್ನು ರಚಿಸಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) 1956 ರಲ್ಲಿ ಹೊಸ ಮೈಸೂರು ರಾಜ್ಯ ನಿರ್ಮಾಣವಾದ ನಂತರ ಸಣ್ಣಪುಟ್ಟ ಬದಲಾವಣೆಗಳನ್ನು ಮಾತ್ರ ತಾಲ್ಲೂಕು ಮಟ್ಟದಲ್ಲಿ ಮಾಡಲಾಗಿದೆ ಆದರೆ, ಜಿಲ್ಲೆಗಳ ಪುನರ್ ವಿಂಗಡಣೆಯನ್ನು ಮೂರು ಸಲ ಮಾಡಲಾಗಿದೆ 1950 ರ ದಶಕದಲ್ಲಿ ಸಮುದಾಯ ಅಭಿವೃದ್ಧಿ ಯೋಜನೆಗಳು (Community Development Programs) ಜಾರಿಯಲ್ಲಿದ್ದಾಗಲೂ ಕೂಡ ಬೇರೆ ರಾಜ್ಯಗಳಲ್ಲಿ ತಾಲ್ಲೂಕುಗಳನ್ನು ವಿಭಜಿಸಿ ಅಭಿವೃದ್ಧಿ ಮಂಡಳಿಗಳನ್ನಾಗಿ (Development Block) ಮಾಡಲಾಗಿತ್ತು ಆದರೆ ಕರ್ನಾಟಕದಲ್ಲಿ ತಾಲ್ಲೂಕುಗಳನ್ನೇ Blockಗಳೆಂದು ಪರಿಗಣಿಸಲಾಯಿತು ಆಗಲೂ ಕೂಡ ತಾಲ್ಲೂಕುಗಳು ಪುನರ್‌ರಚನೆ ಆಗಲಿಲ್ಲ ಶ್ರೀ ವಾಸುದೇವರಾವ್ ಸಮಿತಿಯು ಕೆಲವು ಸೂಚನೆಗಳನ್ನು ಮಾಡಿದ್ದರೂ ಕೂಡ ತಾಲ್ಲೂಕುಗಳ ಪುನರ್ ರಚನೆ ಕಾರ್ಯ ಕೈಗೊಳ್ಳಲಿಲ್ಲ ನಂತರ ಜಿಲ್ಲಾ ರಚನೆಗೆ ಸಂಬಂಧಿಸಿದಂತೆ ಹುಂಡೇಕರ